ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**File No:** DTE-ADMI0ACM1/ 213 /2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:27-09-2021.

**-:: ಜ್ಞಾಪನ ::-**

**ವಿಷಯ:-** ಯುಜಿ ಸಿಇಟಿ-2021ರ ದಾಖಲಾತಿ ಪರಿಶೀಲನಾ ಕಾರ್ಯಕ್ಕೆ ಜಿಲ್ಲೆಗಳಲ್ಲಿ ತೆರೆಯಲಾಗುವ ಸಹಾಯಕ ಕೇಂದ್ರಕ್ಕೆ ನೋಡಲ್ ಅಧಿಕಾರಿಯನ್ನು ನಿಯೋಜಿಸುವ ಕುರಿತು.

**ಉಲ್ಲೇಖ:-** ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂ. ಇಡಿ/ಕೆಇಎ/ಆಡಳಿತ/ನೋಡಲ್/2021, ದಿ:23-09-2021.

-0000000-

2021ನೇ ಸಾಲಿನ ಯುಜಿ ಸಿಇಟಿ ವೃತ್ತಿಪರ ಕೋರ್ಸುಗಳ ಪ್ರವೇಶಕಾರ್ಯಕ್ಕೆ 28 ಜಿಲ್ಲೆಗಳಲ್ಲಿ ಸಹಾಯಕ ಕೇಂದ್ರವನ್ನು ತೆರೆಯಲಾಗಿದ್ದು, ಈ ಕೆಳಕಂಡ ಸಹಾಯಕ ಕೇಂದ್ರಗಳಿಗೆ ಹಿರಿಯ ಉಪನ್ಯಾಸಕರನ್ನು ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲು ಒಪ್ಪಿಗೆ ಸೂಚಿಸಿರುವುದರಿಂದ ವೃತ್ತಿಪರ ಕೋರ್ಸುಗಳ ದಾಖಲಾತಿ ಪರಿಶೀಲನಾ ಕಾರ್ಯವು ಪೂರ್ಣಗೊಳ್ಳುವವರೆಗೆ ಈ ಕೆಳಕಂಡ ಸಹಾಯಕ ಕೇಂದ್ರಗಳಿಗೆ ನಿಯೋಜಿಸಲು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ 2021ನೇ ಸಾಲಿನ ವೃತ್ತಿಪರ ಕೋರ್ಸುಗಳ ದಾಖಲಾತಿ ಪರಿಶೀಲನಾ ಕಾರ್ಯವು ಪೂರ್ಣಗೊಳ್ಳುವವರೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಈ ಕೆಳಕಂಡ ಸಹಾಯಕ ಕೇಂದ್ರಗಳಲ್ಲಿ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲು ನಿಯೋಜಿಸಲಾಗಿದೆ.

| ಕ್ರ ಸಂ. | ನೋಡಲ್ ಅಧಿಕಾರಿಯ ಹೆಸರು | ಕಾರ್ಯನಿರ್ವಹಿಸಬೇಕಾಗಿರುವ ನೋಡಲ್ ಸೆಂಟರ್‌ನ ಹೆಸರು |
|---|---|---|
| 1 | ವಿನೋದ್ ಕುಮಾರ್ ಸೋನಾರ್, ಉಪನ್ಯಾಕರು, ಸರ್ಕಾರಿ ಪಾಲಿಟೆಕ್ನಿಕ್, ಬಾಗಲಕೋಟೆ. ಮೊ.ನಂ. 8317433922 | ಬಸವೇಶ್ವರ ಇಂಜಿನಿಯರಿಂಗ್ ಕಾಲೇಜು, ಪಿಬಿ ನಂ.53, ನಿಜಲಿಂಗಪ್ಪ ವಿದ್ಯಾಗಿರಿ, ಬಾಗಲಕೋಟೆ - 587 103. |
| 2 | ಎಸ್.ವಿ.ಚಂದ್ರಶೇಖರ್, ಉಪನ್ಯಾಸಕರು, ಸರ್ಕಾರಿ ಪಾಲಿಟೆಕ್ನಿಕ್, ಹಿರಿಯೂರು. ಮೊ.ನಂ.9448944313 | ಎಸ್.ಜೆ.ಎಂ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಎನ್.ಹೆಚ್ 4, ಬೈಪಾಸ್, ಚಿತ್ರದುರ್ಗ - 577 502 |

ಮೇಲ್ಕಂಡ ಉಪನ್ಯಾಸಕರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಸಹಾಯಕ ಕೇಂದ್ರಗಳಲ್ಲಿ ಕೂಡಲೇ ವರದಿ ಮಾಡಿಕೊಂಡು ಕಾರ್ಯ ನಿರ್ವಹಿಸಲು ಸೂಚಿಸಲಾಗಿದೆ. ದಾಖಲಾತಿ ಪರಿಶೀಲನೆ ಇಲ್ಲದ ದಿನದಂದು ತಮ್ಮ ಮಾತೃ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ. ದಾಖಲಾತಿ ಪರಿಶೀಲನೆ ಕಾರ್ಯವು ಪೂರ್ಣಗೊಂಡ ನಂತರ ಸಂಬಂಧಪಟ್ಟ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯ ವರದಿ ಮಾಡಿಕೊಳ್ಳತಕ್ಕದ್ದು.

**ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.**

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಇವರಿಗೆ,**

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
2. ಮೇಲ್ಕಂಡ ಉಪನ್ಯಾಸಕರುಗಳಿಗೆ - ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರ ಮುಖಾಂತರ.
3. ಮೇಲ್ಕಂಡ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ನಿಯೋಜಿತ ಉಪನ್ಯಾಸಕರನ್ನು ದಾಖಲಾತಿ ಪರಿಶೀಲನೆ ಕಾರ್ಯಕ್ಕೆ ವರದಿ ಮಾಡಿಕೊಳ್ಳಲು ಅನುಕೂಲವಾಗುವಂತೆ ಸಕಾಲದಲ್ಲಿ ಸಂಸ್ಥೆಗಳ ಕಾರ್ಯಭಾರದಿಂದ ವಿಮುಕ್ತಿಗೊಳಿಸುವುದು.

<u>ಪ್ರತಿ ಮಾಹಿತಿಗಾಗಿ:–</u>

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಇಎಸ್‌ಟಿ(8) ವಿಭಾಗಕ್ಕೆ,
8. ಕಛೇರಿ ಪ್ರತಿ.